# ಕಾಂಗ್ರೆಸ್ಸಿನದು ಗಾಂಧಿ ಹಿಂದುತ್ವ: ಸಿದ್ದರಾಮಯ್ಯ

| ಗಾಂಧೀಜಿ ಪ್ರತಿಮೆ ವಿಶೇಷ | 25 ಅಡಿ ಎತ್ತರ | 20,000 ಕೆ.ಜಿ ತೂಕದ ಪಂಚ ಲೋಹ ವಿಗ್ರಹ | 4.83 ಕೋಟಿ ರೂಪಾಯಿ ವೆಚ್ಚ | ನಿರ್ಮಿಸಿದವರು ಮೈಸೂರಿನ ಕಲಾವಿದ ಅರುಣ್ ಯೋಗಿರಾಜ್ |
|---|---|---|---|---|



ಗಾಂಧಿ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ 'ಗಾಂಧಿ ಭಾರತ' ವಿಶೇಷ ಅಂಚೆ ಲಕೋಟೆಯನ್ನು ಬಿಡುಗಡೆಗೊಳಿಸಲಾಯಿತು.

ಚರಕ ತಿರುಗಿಸುವ ಮೂಲಕ ಗಾಂಧೀಜಿಯವರ ಬೃಹತ್ ಪ್ರತಿಮೆಯನ್ನು ಮಂಗಳವಾರ ಎಐಸಿಸಿ ಅಧ್ಯಕ್ಷ, ರಾಜ್ಯಸಭೆ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅನಾವರಣಗೊಳಿಸಿದರು. ಗಾಂಧೀಜಿ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ನೆನಪಿಗಾಗಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಪ್ರತಿಮೆಯನ್ನು ಸ್ಥಾಪಿಸಲಾಗಿದೆ.

**ಕಲಬುರಗಿಯಲ್ಲೂ ಗಾಂಧಿ ಪ್ರತಿಮೆ:** ಈ ವೇಳೆ ಮಾತನಾಡಿದ ಖರ್ಗೆ ಅವರು, "ಗಾಂಧೀಜಿ 1924ರ ಅಧಿವೇಶನದಲ್ಲಿ ಅಸ್ಪೃಶ್ಯತೆ ನಿವಾರಣೆಗೆ ಕರೆ ನೀಡಿದ್ದರು. ಆದ್ದರಿಂದ ಬೆಳಗಾವಿಯ ಈ ನೆಲ ಐತಿಹಾಸಿಕ ಮಹತ್ವ ಹೊಂದಿದೆ. ಗಾಂಧೀಜಿ ಅಧ್ಯಕ್ಷತೆಯ ಶತಮಾನೋತ್ಸವ ಸಂಭ್ರಮದಲ್ಲಿ ನಾನು ಕಾಂಗ್ರೆಸ್ ಅಧ್ಯಕ್ಷನಾಗಿರುವುದು ಪುಣ್ಯ ಎಂದು ಭಾವಿಸಿರುವೆ. ಮುಂದಿನ ದಿನಗಳಲ್ಲಿ ಕಲಬುರಗಿಯಲ್ಲಿಯೂ ಇಬ್ಬರು ಮಕ್ಕಳೊಂದಿಗೆ ನಡೆಯುತ್ತಿರುವ ಬೃಹತ್ ಗಾಂಧಿ ಪ್ರತಿಮೆ ನಿರ್ಮಾಣ ಮಾಡಲಾಗುವುದು," ಎಂದರು.




ಖರ್ಗೆ ಮತ್ತು ಪ್ರಿಯಾಂಕಾ ಅವರಿಗೆ ಗಾಂಧೀಜಿ ಮೂರ್ತಿ ನೀಡಿ ಗೌರವಿಸಿದ ಸಿಎಂ, ಡಿಸಿಎಂ.

**ಗಾಂಧಿ ಹಿಂದೂ ವಿರೋಧಿ ಅಲ್ಲ:** ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, "ಗಾಂಧೀಜಿ ಸದಾ ಶ್ರೀರಾಮನ ಸ್ಮರಣೆ ಮಾಡುತ್ತಿದ್ದರು. ಅವರು ಅಪ್ಪಟ ಹಿಂದೂ ಎಂಬುದಕ್ಕೆ ಇದಕ್ಕಿಂತ ಬೇರೆ ಸಾಕ್ಷಿ ಬೇಕಿಲ್ಲ. ಆದರೆ ಹಿಂದೂ ಧರ್ಮದಲ್ಲಿ ಸಮಾನತೆ ಮತ್ತು ಸಹೋದರತೆ ಬಯಸಿದ್ದರು. ಅಂಥ ಶುದ್ಧ ಅತ್ಮದ ಹಿಂದೂವನ್ನು ಬಿಜೆಪಿ ಪರಿವಾರದ ಗೋಡ್ಸೆ ಹತ್ಯೆ ಮಾಡಿದ್ದಾರೆ. ನಾವು ಮಹಾತ್ಮ ಗಾಂಧಿ ಅವರ ಹಿಂದುತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ. ಬಿಜೆಪಿ ಪರಿವಾರ ಗೋಡ್ಸೆಯ ಕೊಲೆಗಡುಕ ಸಿದ್ಧಾಂತ ಪಾಲಿಸುತ್ತಿದೆ. ಅದು ಸಂವಿಧಾನ ವಿರೋಧಿ ಮತ್ತು ಅಂಬೇಡ್ಕರ್ ದ್ವೇಷಿ ಕೂಡ ಹೌದು." ಎಂದು ವಾಗ್ದಾಳಿ ನಡೆಸಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ, ಸಂಸದೆ ಪ್ರಿಯಾಂಕಾ ವಾದ್ರಾ, ಡಿಸಿಎಂ ಡಿ.ಕೆ. ಶಿವಕುಮಾರ್, ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಡಾ. ಜಿ.ಪರಮೇಶ್ವರ, ಸತೀಶ್ ಜಾರಕಿಹೊಳಿ, ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಕಾಂಗ್ರೆಸ್ ಮುಖಂಡರಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ, ಜೈರಾಮ್ ರಮೇಶ್ ಉಪಸ್ಥಿತರಿದ್ದರು. ಸಚಿವರು, ಶಾಸಕರು, ಸಂಸದರು, ಮಾಜಿ ಶಾಸಕರು ಸೇರಿದಂತೆ ಅನೇಕ ಗಣ್ಯರು, ಜನಪ್ರತಿನಿಧಿಗಳು ಪಾಲ್ಗೊಂಡಿದ್ದರು.



ಕಾಂಗ್ರೆಸ್ ಸಮಾವೇಶದಲ್ಲಿ ಪಾಲ್ಗೊಂಡಿದ್ದ ಅಪಾರ ಜನಸ್ತೋಮ.

# ಅಂಬೇಡ್ಕರ್‌ರನ್ನು ಅವಮಾನಿಸಿದ ಅಮಿತ್ ಶಾ ರಾಜೀನಾಮೆ ನೀಡಲಿ

## 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶದಲ್ಲಿ ಖರ್ಗೆ ಆಗ್ರಹ

## ಮಹಾತ್ಮಾ ಗಾಂಧೀಜಿಯ ಬೃಹತ್ ಪುತ್ಥಳಿ ಅನಾವರಣ






ಬೆಳಗಾವಿಯ ಸುವರ್ಣಸೌಧದ ಮುಂಭಾಗದಲ್ಲಿ ರಾಷ್ಟ್ರಪಿತ ಮಹಾತ್ಮಾ ಗಾಂಧಿ ಅವರ 25 ಅಡಿ ಎತ್ತರದ ಕಂಚಿನ ಬೃಹತ್ ಪ್ರತಿಮೆಯನ್ನು ಮಂಗಳವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನಾವರಣಗೊಳಿಸಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ, ಸಂಸದೆ ಪ್ರಿಯಾಂಕಾ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸ್ಪೀಕರ್ ಯು.ಟಿ. ಖಾದರ್, ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಸಚಿವರಾದ ಎಚ್.ಕೆ. ಪಾಟೀಲ್, ಸತೀಶ್ ಜಾರಕಿಹೊಳಿ ಮತ್ತಿತರರು ಈ ಸಂದರ್ಭ ಉಪಸ್ಥಿತರಿದ್ದರು.

ಸುವರ್ಣಸೌಧದ ಎದುರು ರಾಷ್ಟ್ರಪಿತನ ಪ್ರತಿಮೆ ಅನಾವರಣದಲ್ಲಿ ಖರ್ಗೆ ಅಭಿಮತ। ಚರಕ ತಿರುಗಿಸುವ ಮೂಲಕ 25 ಅಡಿ ಎತ್ತರದ ಬೃಹತ್ ಪ್ರತಿಮೆ ಉದ್ಘಾಟನೆ

# ಗಾಂಧಿ ಪ್ರತಿಮೆ ಅನಾವರಣ: ಬೆಳಗಾವಿ ಗೌರವ ಹೆಚ್ಚಳ

ಬೆಳಗಾವಿ: ಬೆಳಗಾವಿ ಪುಣ್ಯ ನೆಲ ಇಡೀ ದೇಶಕ್ಕೆ ಪ್ರೇರಣಾ ಶಕ್ತಿ ನೀಡಿದೆ. ನೂರು ವರ್ಷಗಳ ಹಿಂದೆ ಮಹಾತ್ಮ ಗಾಂಧಿ ಅಧ್ಯಕ್ಷತೆ ವಹಿಸಿದ್ದ ಕಾಂಗ್ರೆಸ್ ಅಧಿವೇಶದಲ್ಲಿ ಅಸ್ಪೃಶ್ಯತೆ ನಿವಾರಣೆ ಕುರಿತು ಮಾತನಾಡಿದ್ದರು. ಈ ನಿಟ್ಟಿನಲ್ಲಿ ಮಹಾತ್ಮ ಗಾಂದಿ ಬೃಹತ್ ಪ್ರತಿಮೆ ಅನಾವರಣ ಈ ನೆಲದ ಗೌರವನ್ನು ಇನ್ನಷ್ಟು ಹೆಚ್ಚಿಸಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಮಂಗಳವಾರ ನಗರದ ಸುವರ್ಣಸೌಧದ ಎದುರು ಚರಕ ತಿರುಗಿಸುವ ಮೂಲಕ 25 ಅಡಿ ಎತ್ತರದ ಮಹಾತ್ಮ ಗಾಂಧೀಜಿಯವರ ಬೃಹತ್ ಪ್ರತಿಮೆಯನ್ನು ಉದ್ಘಾಟನೆಗೊಳಿಸಿ ಮಾತನಾಡಿ, ರಾಷ್ಟ್ರಪಿತನ ಪುತ್ಥಳಿಯ ಸ್ಥಾಪನೆಯಿಂದ ಈ ಭಾಗಕ್ಕೆ ಮಾತ್ರವಲ್ಲ, ಇಡೀ ಕರ್ನಾಟಕಕ್ಕೆ ಗೌರವ ತಂದಿದೆ ಎಂದು ಖರ್ಗೆ ಹೆಮ್ಮೆಯಿಂದ ನುಡಿದರು.

**ಸಂವಿಧಾನ, ಪ್ರಜಾತಂತ್ರ ಇಲ್ಲದಿದ್ದರೆ ಅರಾಜಕತೆ**

ಸಂವಿಧಾನ ಹಾಗೂ ಪ್ರಜಾತಂತ್ರ ಇಲ್ಲದಿದ್ದರೆ ದೇಶದಲ್ಲಿ ಅರಾಜಕತೆ ಉಂಟಾಗುತ್ತಿತ್ತು. ಗಾಂಧೀಜಿವರು ದೇಶಕ್ಕೆ ನೀಡಿದ ಕೊಡುಗೆಯನ್ನು ಈಗ ಎಲ್ಲರೂ ಸ್ಮರಿಸುತ್ತಿದ್ದಾರೆ. ಗಾಂಧೀಜಿ ತಮ್ಮ ಅಧ್ಯಕ್ಷತೆಯಲ್ಲಿ 1924 ರಲ್ಲಿ ಜರುಗಿದ ಅಧಿವೇಶನದಲ್ಲಿ ಅಸ್ಪೃಶ್ಯತೆ ನಿವಾರಣೆಗೆ ಕರೆ ನೀಡಿದರು. ಆದ್ದರಿಂದ ಈ ನೆಲವು ಐತಿಹಾಸಿಕ ಮಹತ್ವ ಹೊಂದಿದೆ. 1924 ರಲ್ಲಿ ಕಾಂಗ್ರೆಸ್ ಅಧಿವೇಶನ ನಡೆದ ಸ್ಥಳದಲ್ಲಿಯೇ ನೂರು ವರ್ಷದ ಬಳಿಕ ಪಕ್ಷದ ಕಾರ್ಯಕಾರಿಣಿ ಸಭೆ ನಡೆಸಿರುವುದು ಅತ್ಯಂತ ಮಹತ್ವದ್ದಾಗಿದೆ ಎಂದರು.

**ಕಲಬುರಗಿಯಲ್ಲೂ ಗಾಂಧಿ ಪ್ರತಿಮೆ:** ಅಲ್ಲದೆ, ಕಲ್ಯಾಣ ಕರ್ನಾಟಕದ ಕೇಂದ್ರ, ಕಲಬುರಗಿಯಲ್ಲೂ ಕೂಡ ಮಹಾತ್ಮ ಗಾಂಧೀಜಿಯವರ ವಿಶೇಷ ಪುತ್ಥಳಿಯನ್ನು ಸ್ಥಾಪಿಸಲಾಗುತ್ತಿದೆ ಎಂದು ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.

**ವಿಷಬೀಜ ಬಿತ್ತಲು ಅವಕಾಶ ನೀಡೆವು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಮಹಾತ್ಮ ಗಾಂಧಿಜಿ ಹಿಂದೂ ವಿರೋಧಿ ಆಗಿರಲಿಲ್ಲ, ಸಾವಿನ ಕೊನೇಕ್ಷಣದಲ್ಲಿ ಹೇ ರಾಮ್ ಎಂದು ಹೇಳಿದ್ದರು. ಎಲ್ಲ ಧರ್ಮಗಳನ್ನು ಸಮಾನವಾಗಿ ಕಾಣುವ ಹೃದಯ ವೈಶಾಲ್ಯವನ್ನು ಅವರು ಹೊಂದಿ ದ್ದರು. ಆದರೆ ಬಿಜೆಪಿಯವರು ಧರ್ಮಗಳ ನಡುವೆ ವಿಷಬೀಜ ಬಿತ್ತುವ ಕೆಲಸ ಮಾಡುತ್ತಿದ್ದು ಇದಕ್ಕೆ ನಾವು ಆಸ್ಪದ ನೀಡುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದರು.

ಇಂದಿನ ಯುವಜನತೆಗೆ ಹಾಗೂ ಮುಂದಿನ ಪೀಳಿಗೆಗೆ ಗಾಂಧೀಜಿ ವಿಚಾರಧಾರೆ ತಲುಪಿಸುವ ಉದ್ದೇಶದಿಂದ ಪುತ್ಥಳಿಯನ್ನು ಸ್ಥಾಪಿಸಲಾಗಿದೆ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೂಡ ಮಹಾತ್ಮರ ತತ್ವಗಳನ್ನು ಸಂವಿಧಾನದಲ್ಲಿ ಅಳವಡಿಸಿದ್ದಾರೆ. ಸಂವಿಧಾನ ದುರ್ಬಲಗೊಳಿಸುವ ಪ್ರಯತ್ನ ನಿರಂತರವಾಗಿ ನಡೆದಿದೆ. ಅದಕ್ಕೆ ನಾವು ಆಸ್ಪದ ನೀಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕರೆ ನೀಡಿದರು.

**ಪ್ರಮುಖ ಗಣ್ಯರು ಭಾಗಿ:** ಈ ಸಂದರ್ಭದಲ್ಲಿ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ವಾದ್ರಾ, ಕಾನೂನು, ಸಂಸದೀಯ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್.ಕೆ. ಪಾಟೀಲ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ. ಜಿ.ಪರಮೇಶ್ವರ್, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಹಿರಿಯ ಮುಖಂಡರಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ, ಜೈರಾಮ್ ರಮೇಶ್ ಮತ್ತಿತರರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

**ಸ್ವಾತಂತ್ರ್ಯ ಯೋಧರಿಗೆ ಗೌರವ:** ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ಮಾತನಾಡಿ, ರಾಮರಾಜ್ಯ ಮತ್ತು ಗ್ರಾಮರಾಜ್ಯ ಮಹಾತ್ಮ ಗಾಂಧೀಜಿಯವರ ಕನಸಾಗಿತ್ತು. ಭ್ರಾತೃತ್ವ ಮತ್ತು ತ್ಯಾಗ ರಾಮರಾಜ್ಯದ ನೈಜ ಪರಿಕಲ್ಪನೆಯಾಗಿದೆ. ಇದು ಕೇವಲ ಪುತ್ಥಳಿ ಅನಾವರಣ ಕಾರ್ಯಕ್ರಮ ಮಾತ್ರವಲ್ಲ, ಸ್ವಾತಂತ್ರ್ಯ ಯೋಧರಿಗೆ ಗೌರವಿಸುವ ಮತ್ತು ಸಂವಿಧಾನದ ಘನತೆ ಎತ್ತಿಹಿಡಿಯುವ ಪವಿತ್ರ ಕಾರ್ಯಕ್ರಮವಾಗಿದೆ ಎಂದರು.



ಸುವರ್ಣ ಸೌಧದ ಎದುರು ಮಹಾತ್ಮ ಗಾಂಧೀಜಿ ಪ್ರತಿಮೆಯನ್ನು ಚರಕ ತಿರುಗಿಸುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನಾವರಣಗೊಳಿಸಿದರು. ಪ್ರಿಯಾಂಕಾ ವಾದ್ರಾ, ಸಿಎಂ ,ಡಿಸಿಎಂ ಇದ್ದರು.

## ಗ್ರಾಮೀಣ ವಿವಿಗೆ ಗಾಂಧೀಜಿ ಹೆಸರು

ಗದುಗಿನ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾನಿಲಯವನ್ನು ಮಹಾತ್ಮ ಗಾಂಧೀಜಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡುವುದರ ಜತೆಗೆ ನೂತನ ಲಾಂಛನವನ್ನು ಸಮಾರಂಭದಲ್ಲಿ ಬಿಡುಗಡೆಗೊಳಿಸಲಾಯಿತು. ಕುಲಪತಿ ಡಾ.ಸುರೇಶ್ ನಾಡಗೌಡರ್ ಉಪಸ್ಥಿತರಿದ್ದರು.

## ಕನ್ನಡಗೀತೆಗೆ ತಲೆದೂಗಿದ ಪ್ರಿಯಾಂಕಾ ವಾದ್ರಾ

ಸಮಾರಂಭದಲ್ಲಿ ಗಾಯಕಿ ಸಾಧ್ವಿನಿ ಕೊಪ್ಪ ಹಾಡಿದ ಕರ್ನಾಟಕ ಏಕೀಕರಣ ಚಳವಳಿಗೆ ಪ್ರೇರಣೆಯಾಗಿದ್ದ ಹುಯಿಲಗೋಳ ನಾರಾಯಣರಾವ್ ಅವರು ರಚಿಸಿದ 'ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು' ಗೀತೆಯನ್ನು ಕೇಳಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಮೂಕವಿಸ್ಮಿತರಾದರು. ನಂತರ ಗೀತೆಯ ಕುರಿತು ಪಕ್ಕದಲ್ಲೇ ಕುಳಿತಿದ್ದ ಸಚಿವ ಎಚ್.ಕೆ ಪಾಟೀಲ ಅವರಿಂದ ಭಾವಾನುವಾದ ಕೇಳಿ ತಿಳಿದು ಸಂತಸಪಟ್ಟರು.



ವಿಧಾನಸಭೆಯ ಸಭಾಂಗಣ ಹಾಗೂ ಪ್ರಪಂಚದ ಮೊಟ್ಟ ಮೊದಲ ಸಂಸತ್, 12 ನೇ ಶತಮಾನದ ಅನುಭವ ಮಂಟಪದ ತೈಲವರ್ಣ ಚಿತ್ರವನ್ನು ವೀಕ್ಷಿಸಿದ ಕಾಂಗ್ರೆಸ್ ಮುಖಂಡರು.

## ಕೈ ಕಾರ್ಯಕ್ರಮಕ್ಕೆ ಬಿಜೆಪಿ ಶಾಸಕ ಹಾಜರು

ಬಿಜೆಪಿಯಿಂದ ಅಂತರ ಕಾಯ್ದುಕೊಂಡಿರುವ ಶಾಸಕ ಎಸ್.ಟಿ ಸೋಮಶೇಖರ್ ಮಂಗಳವಾರ ಬೆಳಗಾವಿಯಲ್ಲಿ ನಡೆದ ಗಾಂಧಿ ಪ್ರತಿಮೆ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಬಿಜೆಪಿ ಪಕ್ಷಕ್ಕೆ ಮುಜುಗರ ತರಿಸಿದ ಘಟನೆ ನಡೆಯಿತು.

ಸುವರ್ಣಸೌಧದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ನಾಯಕರ ಜೊತೆ ಆಗಮಿಸಿದ ಶಾಸಕ ಸೋಮಶೇಖರ್ ಎಲ್ಲರ ಗಮನಸೆಳೆದರು. ಸಂದರ್ಭದಲ್ಲಿ ಪ್ರತಿಕ್ರಿಯೆ ನೀಡಿ, ಇದು ಸರಕಾರಿ ಕಾರ್ಯಕ್ರಮ. ನನಗೂ ಆಹ್ವಾನ ನೀಡಿದ್ದರು, ಈ ಕಾರಣಕ್ಕೆ ಆಗಮಿಸಿದ್ದೇನೆ ಎಂದು ಹೇಳಿದರು.



ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬದಲಾವಣೆ ವಿಚಾರವಾಗಿ ಮಾತನಾಡಿ, ಅಧ್ಯಕ್ಷರ ಬದಲಾವಣೆ ಇದು ಮಕ್ಕಳಾಟವಲ್ಲ. ಪಕ್ಷದ ನಾಯಕರು ವಿಜಯೇಂದ್ರ ಬೆನ್ನಿಗೆ ಇದ್ದು ಯಾವುದೇ ಕಾರಣಕ್ಕೂ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದರು.

> ಗಾಂಧೀಜಿಯವರು ಸದಾ ರಾಮಸ್ಮರಣೆ ಮಾಡುತ್ತಿದ್ದರು. ಅವರು ಅಪ್ಪಟ ಹಿಂದೂ ಎಂಬುದಕ್ಕೆ ಇದಕ್ಕಿಂತ ಬೇರೆ ಸಾಕ್ಷಿ ಬೇಕಿಲ್ಲ. ಆದರೆ ಕೆಲವರು ಅವರನ್ನು ಅನವಶ್ಯವಾಗಿ ವಿರೋಧ ಮಾಡುತ್ತಿದ್ದು, ಇದಕ್ಕೆ ನಾವು ಅವಕಾಶ ನೀಡುವುದಿಲ್ಲ.
>
> **ಸಿದ್ದರಾಮಯ್ಯ**, ಮುಖ್ಯಮಂತ್ರಿ

ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ • ಸುವರ್ಣ ಸೌಧ ಅಂಗಳದಲ್ಲಿ ಗಾಂಧಿ ಪ್ರತಿಮೆ ಅನಾವರಣ

# ಬಾಪುವಿನ ತ್ಯಾಗ, ಹೋರಾಟ ಸ್ಮರಣೆ

• ಇಮಾಮ್ ಹುಸೇನ್ ಗೂಡುನವರ

ಬೆಳಗಾವಿ: ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಪ್ರತಿಷ್ಠಾಪಿಸಿದ ಮಹಾತ್ಮ ಗಾಂಧೀಜಿ ಪ್ರತಿಮೆ ಅನಾವರಣದ ಐತಿಹಾಸಿಕ ಕ್ಷಣಕ್ಕೆ ಇಲ್ಲಿನ ಸುವರ್ಣ ವಿಧಾನಸೌಧ ಅಂಗಳ ಮಂಗಳವಾರ ಸಾಕ್ಷಿಯಾಯಿತು.

ಒಟ್ಟು 20 ಟನ್ ತೂಕದ ಮತ್ತು 25 ಅಡಿ ಎತ್ತರದ (ನೆಲಮಟ್ಟದಿಂದ 37 ಅಡಿ ಎತ್ತರ) ಕಂಚಿನ ಪ್ರತಿಮೆಯನ್ನು ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆಗಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅನಾವರಣ ಮಾಡಿದರು. ಮರುಕ್ಷಣವೇ ಬಾನಂಗಳದಲ್ಲಿ ಸಿಡಿಮದ್ದುಗಳ ಮೂಲಕ ಬಣ್ಣಬಣ್ಣದ ಚಿತ್ತಾರ ಮೂಡಿತು.

ಸೌಧದ ಎದುರು ರಾಣಿ ಚನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಬಿ.ಆರ್.ಅಂಬೇಡ್ಕರ್ ಪ್ರತಿಮೆಗಳಿವೆ. ಈಗ ಸೌಧದ ಉತ್ತರ ದ್ವಾರದ ಬಳಿ ಬಾಪೂಜಿ ಪ್ರತಿಮೆ ಪ್ರತಿಷ್ಠಾಪನೆಯಾಗಿದೆ.

'1924ರಲ್ಲಿ ಗಾಂಧೀಜಿ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಅಧಿವೇಶನ ನಡೆದಿದ್ದ ಸ್ಥಳವಾದ ಟಿಳಕವಾಡಿಯ ವೀರಸೌಧದಲ್ಲಿ ಕಳೆದ ವರ್ಷ ಡಿಸೆಂಬರ್ 26ರಂದು ಕಾಂಗ್ರೆಸ್‌ನ ಕಾರ್ಯಕಾರಿ ಸಮಿತಿಯ ವಿಸ್ತೃತ ಸಭೆ ಮಾಡಿದ್ದೆವು. ಈಗ ಬೆಳಗಾವಿ ನೆಲದಲ್ಲೇ ಗಾಂಧಿ ಪ್ರತಿಮೆ ಅನಾವರಣ ಮಾಡುತ್ತಿರುವುದು ನನ್ನ ಸೌಭಾಗ್ಯ' ಎಂದು ಖರ್ಗೆ ಸಂತಸ ವ್ಯಕ್ತಪಡಿಸಿದರು.



ಬೆಳಗಾವಿಯ ಸುವರ್ಣ ವಿಧಾನಸೌಧ ಆವರಣದಲ್ಲಿ ಮಹಾತ್ಮ ಗಾಂಧೀಜಿ ಪ್ರತಿಮೆ ಎದುರು ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಚರಕ ತಿರುಗಿಸಿದರು. ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಉಪಸ್ಥಿತರಿದ್ದರು

## ವಿಶ್ವವಿದ್ಯಾಲಯಕ್ಕೆ ಗಾಂಧಿ ಹೆಸರು

ಗದಗದಲ್ಲಿ ಇರುವ 'ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ'ದ ಹೆಸರನ್ನು 'ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ' ಎಂದು ಮರುನಾಮಕರಣ ಮಾಡಿ, ಲಾಂಛನ ಬಿಡುಗಡೆ ಮಾಡಲಾಯಿತು.

'ಇಬ್ಬರು ಮಕ್ಕಳೊಂದಿಗೆ ಮಹಾತ್ಮ ಗಾಂಧಿ ನಿಂತಿರುವ ಚಿತ್ರವನ್ನು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಇಷ್ಟಪಟ್ಟಿದ್ದಾರೆ. ಉತ್ತರ ಪ್ರದೇಶದ ನೋಯ್ಡಾದಲ್ಲಿ ಆ ಚಿತ್ರ ಹೋಲುವ ಪ್ರತಿಮೆ ಪ್ರತಿಷ್ಠಾಪಿಸಲು ಒಲವು ತೋರಿದ್ದಾರೆ. ಅಂಥದ್ದೇ ಪ್ರತಿಮೆಯನ್ನು ಕಲಬುರಗಿಯಲ್ಲೂ ಪ್ರತಿಷ್ಠಾಪಿಸುತ್ತೇವೆ. ಅದರ ಕೆಳಗೆ, 'ನನ್ನ ಜೀವನವೇ ನನ್ನ ಸಂದೇಶ' ಎಂದು ಬರೆಯಿಸುತ್ತೇವೆ' ಎಂದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, 'ಗಾಂಧೀಜಿಯವರು ರಾಮನನ್ನು ಸದಾ ಸ್ಮರಿಸುತ್ತಿದ್ದರು. ನಾಥೂರಾಮ್ ಗೋಡ್ಸೆ ಎಂಬಾತ ಗಾಂಧಿ ಹತ್ಯೆ ಮಾಡಿದಾಗ, 'ಹೇ ರಾಮ್' ಎನ್ನುತ್ತಲೇ ಜೀವಬಿಟ್ಟರು. ಅವರು ಅಪ್ಪಟ ಹಿಂದೂ ಎಂಬುದಕ್ಕೆ ಇದಕ್ಕಿಂತ ಬೇರೆ ಪುರಾವೆ ಬೇಕಿಲ್ಲ' ಎಂದರು.

> ಗಾಂಧೀಜಿ ಹಿಂದೂ ವಿರೋಧಿ ಆಗಿದ್ದರು ಎಂದು ಬಿಜೆಪಿ ಬಿಂಬಿಸುತ್ತದೆ. ಅದು ಸತ್ಯಕ್ಕೆ ದೂರದ ಮಾತು. ಗಾಂಧಿ ಎಲ್ಲರ ಒಳಿತನ್ನು ಬಯಸಿ, ಅಹಿಂಸೆ ಪ್ರತಿಪಾದಿಸಿದರು
> **ಸಿದ್ದರಾಮಯ್ಯ,** ಮುಖ್ಯಮಂತ್ರಿ

### ಮುಖ್ಯಾಂಶಗಳು

- ವಿವಿಧೆಡೆಯಿಂದ ಬಂದಿದ್ದ ಗಾಂಧಿ ಪ್ರೇಮಿಗಳು
- ಪ್ರತಿಮೆ ಎದುರು ಫೋಟೊ ಕ್ಲಿಕ್ಕಿಸಿಕೊಳ್ಳುವ ಸಂಭ್ರಮ

> ಗಾಂಧೀಜಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಬೆಳಗಾವಿಯಲ್ಲಿ ಮಾತ್ರ. ಗಾಂಧೀಜಿ ಪ್ರತಿಮೆ ಪ್ರತಿಷ್ಠಾಪನೆ ರಾಜ್ಯಕ್ಕೆ ಗೌರವ ತರುವ ಕೆಲಸ
> **ಮಲ್ಲಿಕಾರ್ಜುನ ಖರ್ಗೆ,** ಅಧ್ಯಕ್ಷ, ಎಐಸಿಸಿ

'ಇದು ಸರ್ಕಾರಿ ಕಾರ್ಯಕ್ರಮ. ಪಕ್ಷಾತೀತವಾಗಿ ಎಲ್ಲ ಜನಪ್ರತಿನಿಧಿಗಳನ್ನು ಆಹ್ವಾನಿಸಿದ್ದೇವೆ' ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದರು. ಆದರೆ, ಬಿಜೆಪಿಯ ಜನಪ್ರತಿನಿಧಿಗಳು ಕಾರ್ಯಕ್ರಮದಿಂದ ದೂರವುಳಿದರು.

ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಸ್ವಾತಂತ್ರ್ಯ ಹೋರಾಟಗಾರರು ಉಪಸ್ಥಿತರಿದ್ದರು. ಹಲವರು 'ಗಾಂಧಿ ಟೋಪಿ' ಧರಿಸಿದ್ದರು. ಶಕ್ತಿಸೌಧದ ಅಂಗಳದಲ್ಲಿ 'ಗಾಂಧೀಜಿ ಗುಣಗಾನ' ನಡೆಯಿತು. ಜಿಲ್ಲೆಯ ವಿವಿಧೆಡೆಯಿಂದ ಬಂದಿದ್ದ ಗಾಂಧಿಪ್ರೇಮಿಗಳು ಪ್ರತಿಮೆ ಎದುರು, ಚಿತ್ರಗಳನ್ನು ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು.

'ಗಾಂಧಿ ಭಾರತ' ಹೆಸರಿನಲ್ಲಿ ಹೊರತಂದಿರುವ ವಿಶೇಷ ಅಂಚೆ ಲಕೋಟೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರತಂದ 'ಗಾಂಧಿ ಭಾರತ- ಮರುನಿರ್ಮಾಣ' ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

# ಗಾಂಧಿ ಹೆಜ್ಜೆ 100ರ ಸ್ಮರಣೆ

## ಬೆಳಗಾವಿಯಲ್ಲಿ ಕಾಂಗ್ರೆಸ್‌ನ ಜೈ ಬಾಪು, ಜೈ ಭೀಮ್ ಸಮಾವೇಶ


## ಬಿಜೆಪಿ, ಸಂಘ ಪರಿವಾರ ವಿರುದ್ಧ ಸಿದ್ದು, ಖರ್ಗೆ, ಪ್ರಿಯಾಂಕಾ ವಾಗ್ದಾಳಿ

ಬೆಳಗಾವಿ: ಮಹಾತ್ಮ ಗಾಂಧೀಜಿ ಅವರು ಬೆಳಗಾವಿಯಲ್ಲಿ ನಡೆದ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿ ನೂರು ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ಎಐಸಿಸಿ ಏರ್ಪಡಿಸಿದ್ದ 'ಗಾಂಧಿ ಭಾರತ– 100' ಕಾರ್ಯಕ್ರಮ ಮಂಗಳವಾರ ಇಲ್ಲಿ ಅತ್ಯಂತ ಅರ್ಥಪೂರ್ಣವಾಗಿ ನಡೆಯಿತು.

ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ವಿರುದ್ಧ ಹೋರಾಡಲು ಪ್ರತಿಜ್ಞೆಗೈದ ಸಮಾವೇಶದಲ್ಲಿ, ಪ್ರಾಣ ತೆತ್ತಾದರೂ ಸರಿ ಸಂವಿಧಾನ ರಕ್ಷಿಸುವ ಸಂಕಲ್ಪ ತೊಟ್ಟಿತು. 2029ರ ಚುನಾವಣೆಯಲ್ಲಿ ಸಂವಿಧಾನ ವಿರೋಧಿ ಮೋದಿ ಸರ್ಕಾರಕ್ಕೆ ಪಾಠ ಕಲಿಸಲು ಬೆಳಗಾವಿ ಸಮಾವೇಶದ ಮೂಲಕ ಜನತೆ ನಿರ್ಧರಿಸಿದ್ದಾರೆ ಎಂಬ ಕಹಳೆಯೂ ಕಾಂಗ್ರೆಸ್ಸಿಗರಿಂದ ಮೊಳಗಿತು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಮೋದಿ ಮತ್ತು ಶಾ ವಿರುದ್ಧ ವಾಗ್ದಾಳಿ ನಡೆಸಿದರು. ಈ ಇಬ್ಬರೂ ಬಾಪು, ಅಂಬೇಡ್ಕರ್ ಮತ್ತು ಸಂವಿಧಾನ ವಿರೋಧಿಗಳು; ದಲಿತರ ಶತ್ರುಗಳು ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ನೇತೃತ್ವದ ಸರ್ಕಾರದಿಂದ ದೇಶಕ್ಕೆ ಅಪಾಯ ಎಂದರು.

**ಗಾಂಧಿ ಭಾರತ ಮರು ನಿರ್ಮಾಣ?:** ಬಿಜೆಪಿ ಮತ್ತು ಆರ್‌ಎಸ್‌ಎಸ್‌ಗಳನ್ನು ಟೀಕಿಸಿದ್ದರ ಆಚೆ, 'ಗಾಂಧಿ ಭಾರತ ಮರು ನಿರ್ಮಾಣ' ಮಾಡುವ; ಸತ್ಯ ಅಹಿಂಸೆಯ ಮೂಲಕ ವಿಶ್ವದಲ್ಲಿ 'ಕಮಾಲ್ ಮಾಡಿದ ಸಾಬರಮತಿಯ ಸಂತ'ನ ಸಂದೇಶಗಳನ್ನು ಸಾರಲು ಕರ್ನಾಟಕದಲ್ಲಿ ವರ್ಷವಿಡೀ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳುವ ನಿರ್ಣಯ ತೆಗೆದುಕೊಂಡಿದ್ದು ಸಮಾವೇಶದ ಪ್ರಧಾನ ಅಂಶ.

ಪುಟ-7



'ಗಾಂಧಿ ಭಾರತ– 100' ಸಮಾವೇಶದ ಅಂಗವಾಗಿ ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ನಿರ್ಮಾಣವಾಗಿರುವ ಮಹಾತ್ಮ ಗಾಂಧೀಜಿ ಪ್ರತಿಮೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಅನಾವರಣ ಮಾಡಿದರು. ಸ್ಪೀಕರ್‌ಗಳಾದ ಯು.ಟಿ. ಖಾದರ್, ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಸಚಿವ ಎಚ್.ಕೆ.ಪಾಟೀಲ್, ಸಂಸದೆ ಪ್ರಿಯಾಂಕಾ ಗಾಂಧಿ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

### ಬಿಜೆಪಿ ಪರಿವಾರ ಗಾಂಧಿ ತತ್ವ ವಿರೋಧಿ: ಸಿಎಂ ಕಿಡಿ

" ಗಾಂಧಿಯವರ ಹಿಂದುತ್ವದ ದ್ವೇಷಿಯಾಗಿರುವ, ಗಾಂಧಿ ತತ್ವದ ವಿರೋಧಿಯಾಗಿರುವ ಬಿಜೆಪಿ ಪರಿವಾರ ಸಂವಿಧಾನ ವಿರೋಧಿ, ಅಂಬೇಡ್ಕರ್ ದ್ವೇಷಿಯೂ ಆಗಿದೆ. ಗಾಂಧಿ ಯವರ ಗ್ರಾಮ ಸ್ವರಾಜ್ಯದ ಕನಸು ನನಸು ಮಾಡುವ ಗುರಿಯೊಂದಿಗೆ ಜೈ ಬಾಪು–ಜೈ ಭೀಮ್–ಜೈ ಸಂವಿಧಾನ ಅಭಿಯಾನ ಮುನ್ನಡೆಸುತ್ತೇವೆ.

▪ಸಿದ್ದರಾಮಯ್ಯ, ಮುಖ್ಯಮಂತ್ರಿ

### ಪ್ರಿಯಾಂಕಾ ನಮ್ಮ ಕಿತ್ತೂರು ಚನ್ನಮ್ಮ: ಖರ್ಗೆ ಹೊಗಳಿಕೆ


ಬಿಜೆಪಿ ಮತ್ತು ಆರ್‌ಎಸ್‌ಎಸ್ ಜೊತೆ ಹೋರಾಡುವ ಸಾಮರ್ಥ್ಯ ಮತ್ತು ಶಕ್ತಿಗಳು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಅವರಲ್ಲಿದ್ದು ಇವರೇ ನಮ್ಮ ಪಾಲಿಗೆ ಕಿತ್ತೂರು ಚನ್ನಮ್ಮ ಮತ್ತು ಝಾನ್ಸಿ ರಾಣಿ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.

### ಸಿಎಂ, ಡಿಸಿಎಂ ನಂತರ ಈಗ ಖರ್ಗೆ ತ್ಯಾಗದ ಮಾತು!

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ನಂತರ ಈಗ ಖುದ್ದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೂಡ ತ್ಯಾಗದ ಮಾತನಾಡಿದರು. 'ಕಾಂಗ್ರೆಸ್ ಪಕ್ಷಕ್ಕೆ ತ್ಯಾಗದ ದೊಡ್ಡ ಇತಿಹಾಸವೇ ಇದೆ. ಇಂದಿರಾ ಗಾಂಧಿ ಮತ್ತು ರಾಜೀವ್ ಗಾಂಧಿ, ಸೋನಿಯಾ ಗಾಂಧಿ ಸಾಕಷ್ಟು ತ್ಯಾಗ ಮಾಡಿದ್ದಾರೆ. ನಮಗೆ ತ್ಯಾಗದ ದೊಡ್ಡ ಪರಂಪರೆಯೇ ಇದೆ' ಎಂದರು.

# ಗಾಂಧೀಜಿ ಪ್ರತಿಮೆ ಅನಾವರಣ

## ಗಾಂಧಿ ಭಾರತ ಮರು ನಿರ್ಮಾಣ ಪ್ರಕಟಣೆಗಳ ಬಿಡುಗಡೆ



1924 ರಲ್ಲಿ ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸಂದರ್ಭದಲ್ಲಿ ಕೈಗೊಂಡ ನಿರ್ಣಯಗಳು, ಅಧ್ಯಕ್ಷೀಯ ಭಾಷಣ ಮತ್ತಿತರ ಮಾಹಿತಿಗಳು ಹಾಗೂ ಅಪರೂಪದ ಛಾಯಾಚಿತ್ರಗಳನ್ನು ಒಳಗೊಂಡು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ ಗಾಂಧಿ ಭಾರತ ಮರು ನಿರ್ಮಾಣ ಹಾಗೂ Reclaiming Gandhi Bharath ಕನ್ನಡ ಹಾಗೂ ಆಂಗ್ಲ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಬಿಡುಗಡೆ ಮಾಡಿದರು.

1924 ರ ಕಾಂಗ್ರೆಸ್ ಅಧಿವೇಶನದ ನಿರ್ಣಯಗಳು, ಕೊಲ್ಕತ್ತಾ ಒಪ್ಪಂದ ಮತ್ತು ನೇಯ್ಗೆಯ ಮತಾಧಿಕಾರ, ಸರೋಜಿನಿ ನಾಯ್ಡು ಅವರ ವಿದೇಶಾಂಗ ಸೇವೆ, ಅಕಾಲಿಗಳಿಗೆ ಅಭಿನಂದನೆ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳು, ಬರ್ಮಾದ ಜನರಿಗೆ ಸಹಾನುಭೂತಿ, ಕೋಹತ್ ಹಾಗೂ ಗುಲಬರ್ಗಾ ಗಲಭೆಗಳು, ಅಸ್ಪೃಶ್ಯತೆ ನಿವಾರಣೆ, ಅಧಿವೇಶನದ ಲೆಕ್ಕಪರಿಶೋಧನೆ ಸೇರಿದಂತೆ ಐತಿಹಾಸಿಕ ಮಾಹಿತಿಗಳು ಹಾಗೂ ಛಾಯಾಚಿತ್ರಗಳನ್ನು ಈ ಪುಸ್ತಕಗಳು ಒಳಗೊಂಡಿವೆ.

## ವಿಶೇಷ ಅಂಚೆ ಚೀಟಿ ಕೃತಿಗಳ ಬಿಡುಗಡೆ

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸವಿನೆನಪಿಗಾಗಿ ಗಾಂಧೀ ಭಾರತ ವಿಶೇಷ ಅಂಚೆ ಲಕೋಟೆಯನ್ನು ಕೂಡ ಬಿಡುಗಡೆಗೊಳಿಸಲಾಯಿತು.


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಹೊರತರಲಾದ ಗಾಂಧಿ ಭಾರತ-ಮರುನಿರ್ಮಾಣ ಹಾಗೂ ಉದಯ ಕಾಲ ಸಮೂಹದ ಗಾಂಧಿ ಬಿತ್ತಿದ ಬೆಳಕು ಪುಸ್ತಕಗಳನ್ನು ಗಣ್ಯರು ಬಿಡುಗಡೆಗೊಳಿಸಿದರು.

ಕರ್ನಾಟಕ ಏಕೀಕರಣ ಚಳವಳಿಗೆ ಪ್ರೇರಣೆಯಾಗಿದ್ದ ಹುಯಿಲಗೋಳ ನಾರಾಯಣರಾವ್ ಅವರು ರಚಿಸಿದ ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು ಗೀತೆಯನ್ನು ಸಾಧ್ವಿನಿ ಕೊಪ್ಪ ಅವರು ಪ್ರಸ್ತುತಪಡಿಸಿದರು.


## ಬಾನಂಗಳಕ್ಕೆ ಚಿಮ್ಮಿದ ರಂಗು

ಚರಕವನ್ನು ತಿರುಗಿಸುವ ಮೂಲಕ ಮಹಾತ್ಮಾಗಾಂಧೀಜಿಯವರ ಪ್ರತಿಮೆ ಅನಾವರಣಗೊಳಿಸಿದ ಕೂಡಲೇ ಬಾನಂಗಳಕ್ಕೆ ಚಿಮ್ಮಿದ ಬಣ್ಣದ ಚಿತ್ತಾರ ಮೂಡಿಸಿ, ಚಿತ್ತಾಕರ್ಷಕ ಕಾಮನಬಿಲ್ಲಿನ ವರ್ಣಗಳನ್ನು ಅರಳಿಸಿ, ಪಟಾಕಿ ಹಾರಿಸಿದ್ದು ಕಾರ್ಯಕ್ರಮದ ಮೆರುಗು ಹೆಚ್ಚಿಸಿತು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಪರವಾಗಿ ಅತಿಥಿಗಳನ್ನು ಸನ್ಮಾನಿಸಿ, ಗೌರವಿಸಿದರು.



# ಸುವರ್ಣ ವಿಧಾನಸೌಧದಲ್ಲಿ ಮಹಾತ್ಮಾ ಗ



ಬೆಳಗಾವಿ: ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸವಿನೆನಪಿಗಾಗಿ ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ಮಹಾತ್ಮಾ ಗಾಂಧೀಜಿಯವರ ಬೃಹತ್ ಪುತ್ಥಳಿಯನ್ನು ಚರಕವನ್ನು ತಿರುಗಿಸುವ ಮೂಲಕ ಮಂಗಳವಾರ ಅನಾವರಣಗೊಳಿಸಿದರು.

ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ಅವರು, ಬೆಳಗಾವಿ ಸುವರ್ಣ ವಿಧಾನಸೌಧದ ಎದುರು ಗಾಂಧೀಜಿಯವರ ಪುತ್ಥಳಿಯ ಸ್ಥಾಪನೆಯಿಂದ ಈ ಭಾಗಕ್ಕೆ ಮಾತ್ರವಲ್ಲ, ಇಡೀ ಕರ್ನಾಟಕಕ್ಕೆ ಗೌರವ ತಂದಿದೆ ಎಂದರು.

ಸಂವಿಧಾನ ಹಾಗೂ ಪ್ರಜಾತಂತ್ರ ಇಲ್ಲದಿದ್ದರೆ ದೇಶದಲ್ಲಿ ಅರಾಜಕತೆ ಉಂಟಾಗುತ್ತಿತ್ತು. ಗಾಂಧೀಜಿವರು ದೇಶಕ್ಕೆ ನೀಡಿದ ಕೊಡುಗೆಯನ್ನು ಈಗ ಎಲ್ಲರೂ ಸ್ಮರಿಸುತ್ತಿದ್ದಾರೆ.

ಗಾಂಧೀಜಿಯವರು ತಮ್ಮ ಅಧ್ಯಕ್ಷತೆಯಲ್ಲಿ 1924 ರಲ್ಲಿ ಜರುಗಿದ ಅಧಿವೇಶನದಲ್ಲಿ ಅಸ್ಪೃಶ್ಯತೆ ನಿವಾರಣೆಗೆ ಕರೆ ನೀಡಿದರು. ಆದ್ದರಿಂದ ಈ ನೆಲವು ಐತಿಹಾಸಿಕ ಮಹತ್ವವನ್ನು ಹೊಂದಿದೆ. 1924 ರಲ್ಲಿ ಕಾಂಗ್ರೆಸ್ ಅಧಿವೇಶನ ನಡೆದ ಸ್ಥಳದಲ್ಲಿಯೇ ನೂರು ವರ್ಷದ ಬಳಿಕ ಪಕ್ಷದ ಕಾರ್ಯಕಾರಿಣಿ ಸಭೆ ನಡೆಸಿರುವುದು ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದ ಅವರು, ಗುಲ್ಬರ್ಗದಲ್ಲೂ ಕೂಡ ಮಹಾತ್ಮಾಗಾಂಧೀಜಿಯವರ ವಿಶೇಷ ಪುತ್ಥಳಿಯನ್ನು ಸ್ಥಾಪಿಸಲಾಗುತ್ತಿದೆ ಎಂದು ತಿಳಿಸಿದರು.

ಗಾಂಧೀಜಿ ಹಿಂದೂ ವಿರೋಧಿಯಾಗಿರಲಿಲ್ಲ: ಸಿಎಂ

ನಂತರ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಗಾಂಧೀಜಿಯವರು 1924 ರಲ್ಲಿ ಕಾಂಗ್ರೆಸ್ ನ ಐತಿಹಾಸಿಕ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದರು. ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕದಲ್ಲಿ ಅದರಲ್ಲೂ ಬೆಳಗಾವಿಯಲ್ಲಿ ನಡೆದಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ ಎಂದರು.

ಮಹಾತ್ಮಾ ಗಾಂಧೀಜಿಯವರು ಅಂದು ಅಸ್ಪೃಶ್ಯತೆ ನಿವಾರಣೆ, ಸಮಾನತೆ, ಗ್ರಾಮೀಣಾಭಿವೃದ್ಧಿ, ಮಹಿಳಾ ಸಬಲೀಕರಣ ಕುರಿತು ಪ್ರತಿಪಾದನೆ ಮಾಡಿದ್ದರು. ಗಾಂಧೀಜಿಯವರು ಸದಾ ಶ್ರೀರಾಮನ ಸ್ಮರಣೆ ಮಾಡುತ್ತಿದ್ದರು. ಅವರು ಅಪ್ಪಟ ಹಿಂದೂ ಎಂಬುದಕ್ಕೆ ಇದಕ್ಕಿಂತ ಬೇರೆ ಸಾಕ್ಷಿ ಬೇಕಿಲ್ಲ. ಅವರು ಎಂದೂ ಹಿಂದೂ ವಿರೋಧಿಯಾಗಿರಲಿಲ್ಲ, ಆದರೆ ಹಿಂದೂ ಧರ್ಮದಲ್ಲಿ ಸಮಾನತೆ ಮತ್ತು ಸಹೋದರತೆಯನ್ನು ಬಯಸಿದ್ದರು ಎಂದು ಸ್ಮರಿಸಿದರು.


ಹೇ ರಾಮ್ ಎನ್ನುತ್ತಲೇ ಕೊನೆಯುಸಿರೆಳೆದರು. ಅಂತಹ ಮಹಾನ್ ವ್ಯಕ್ತಿಯ ಬಗ್ಗೆ ತಪ್ಪು ಮಾಹಿತಿ ಹರಡಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ ಸಿದ್ದರಾಮಯ್ಯ, ಬಾಬಾಸಾಹೇಬ್ ಅಂಬೇಡ್ಕರ್ ಅವರು ಕೂಡ ಮಹಾತ್ಮಾ ಗಾಂಧೀಜಿಯವರ ತತ್ವಗಳನ್ನು ಸಂವಿಧಾನದಲ್ಲಿ ಅಳವಡಿಸಿದ್ದಾರೆ ಎಂದರು.


ಆದರೆ, ಸಂವಿಧಾನವನ್ನು ದುರ್ಬಲಗೊಳಿಸುವ ಪ್ರಯತ್ನ ನಿರಂತರವಾಗಿ ನಡೆದಿದೆ. ಅದಕ್ಕೆ ನಾವು ಆಸ್ಪದ ನೀಡಬಾರದು ಎಂದು ಕರೆ ನೀಡಿದ ಅವರು, ಇಂದಿನ ಯುವಜನತೆಗೆ ಹಾಗೂ ಮುಂದಿನ ಪೀಳಿಗೆಗೆ ಗಾಂಧೀಜಿಯವರ ವಿಚಾರಧಾರೆಯನ್ನು ತಲುಪಿಸುವ ಉದ್ದೇಶದಿಂದ ಪುತ್ಥಳಿಯನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು.

ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ವಿಧಾನಸಭಾ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಕಾಂಗ್ರೆಸ್ ಪಕ್ಷದ ಮುಖಂಡರಾದ ಕೆ.ಸಿ. ವೇಣುಗೋಪಾಲ್, ರಂದೀಪ್ ಸಿಂಗ್ ಸುರ್ಜೇವಾಲಾ, ಜೈರಾಮ್ ರಮೇಶ್ ಮತ್ತಿತರರು ಸಮಾರಂಭದಲ್ಲಿ ಉಪಸ್ಥಿತರಿದ್ದರು.


## ಗ್ರಾಮೀಣ ವಿವಿಗೆ ಮಹಾತ್ಮಾ ಗಾಂಧೀಜಿ ನಾಮಕರಣ

ಗದುಗಿನ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾನಿಯಲಯವನ್ನು ಮಹಾತ್ಮಾ ಗಾಂಧೀಜಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡುವುದರ ಜತೆಗೆ ನೂತನ ಲಾಂಛನವನ್ನು ಸಮಾರಂಭದಲ್ಲಿ ಬಿಡುಗಡೆಗೊಳಿಸಲಾಯಿತು.





ಉದಯಕಾಲ ದಿನ ಪತ್ರಿಕೆ ಹೊರ ತಂದಿರುವ ಗಾಂಧಿ ಬಿತ್ತಿದ ಬೆಳಕು ಸಂಚಿಕೆಯನ್ನು ಸುವರ್ಣ ವಿಧಾನಸೌಧ ಆವರಣದ ಗಾಂಧಿ ಪ್ರತಿಮೆ ಎದುರು ಪ್ರಿಯಾಂಕಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಎಚ್.ಕೆ. ಪಾಟೀಲ್, ಸತೀಶ್ ಜಾರಕಿಹೊಳಿ, ಬಸವರಾಜ ಹೊರಟ್ಟಿ, ಯು.ಟಿ. ಖಾದರ್ ಮತ್ತು ಪತ್ರಿಕೆಯ ಸಿಇಒ ಡಿ.ಬಿ. ಬಸವರಾಜು ಬಿಡುಗಡೆ ಮಾಡಿದರು.



ಬೆಳಗಾವಿಯ ಸುವರ್ಣ ಸೌಧದ ಆವರಣದಲ್ಲಿ ಮಹಾತ್ಮ ಗಾಂಧಿ ಪ್ರತಿಮೆ ಅನಾವರಣ ಮಾಡಿದ ಬಳಿಕ ಗಾಂಧೀಜಿ ಕುರಿತ ಪುಸ್ತಕವನ್ನು ಮಂಗಳವಾರ ಬಿಡುಗಡೆ ಮಾಡಲಾಯಿತು. ಸಚಿವರಾದ ಸತೀಶ ಜಾರಕಿಹೊಳಿ, ಎಚ್‌.ಕೆ.ಪಾಟೀಲ, ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಿ.ಎಂ ಸಿದ್ದರಾಮಯ್ಯ, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಡಿಸಿಎಂ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲಾ ಪಾಲ್ಗೊಂಡಿದ್ದರು —ಪಿಟಿಐ ಚಿತ್ರ

### ‘ಗಾಂಧಿ ಭಾರತ’ ಸಮಾವೇಶದಲ್ಲಿ ಕೇಂದ್ರ ಸರ್ಕಾರದ ಟೀಕೆ

# ಅಂಬೇಡ್ಕರ್‌ಗೆ ಅವಮಾನ ಸಹಿಸುವುದಿಲ್ಲ: ಪ್ರಿಯಾಂಕಾ

• ಸಂತೋಷ ಈ. ಚಿನಗುಡಿ

> ನಮ್ಮವರು ದೇಶಕ್ಕಾಗಿ ಹೋರಾಡಿ ಪ್ರಾಣ ಬಿಟ್ಟರು. ಜೈಲಿನಲ್ಲಿ ಇದ್ದು ಬ್ರಿಟಿಷರಿಗೆ ಕ್ಷಮಾಪಣೆ ಪತ್ರ ಬರೆಯಲಿಲ್ಲ. ಸಂವಿಧಾನಕ್ಕಾಗಿ ನಾವು ಪ್ರಾಣ ಬಿಡಲೂ ಸಿದ್ಧ
>
> **ಪ್ರಿಯಾಂಕಾ ಗಾಂಧಿ ವಾದ್ರಾ**, ಸಂಸದೆ

> ಮಹಾತ್ಮ ಗಾಂಧೀಜಿ ಅವರನ್ನು ಕೊಂದ ಗೋಡ್ಸೆ, ಸಾವರ್ಕರ್ ಅವರ ಶಿಷ್ಯ. ಹೀಗಾಗಿ, ಬಿಜೆಪಿಯವರು ಅವರಿಬ್ಬರನ್ನೂ ತಮ್ಮ ನಾಯಕರನ್ನಾಗಿ ಮಾಡಿಕೊಂಡಿದ್ದಾರೆ
>
> **ಮಲ್ಲಿಕಾರ್ಜುನ ಖರ್ಗೆ**, ಅಧ್ಯಕ್ಷ, ಎಐಸಿಸಿ

ಬೆಳಗಾವಿ: ‘ಭಾರತದ ಸಂವಿಧಾನಕ್ಕೆ, ಸಂವಿಧಾನ ನೀಡಿದ ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದರೆ ಸಹಿಸುವುದಿಲ್ಲ. ಸಂವಿಧಾನ ರಕ್ಷಣೆಗೆ ನಾವು ಪ್ರಾಣ ತ್ಯಾಗಕ್ಕೂ ಸಿದ್ಧ’ ಎಂದು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಹೇಳಿದರು.

‘ಗಾಂಧಿ ಭಾರತ’ ಪ್ರಯುಕ್ತ ಎಐಸಿಸಿ ವತಿಯಿಂದ ನಗರದಲ್ಲಿ ಮಂಗಳವಾರ ನಡೆದ ‘ಜೈ ಬಾಪು, ಜೈ ಭೀಮ್, ಜೈ ಸಂವಿಧಾನ’ ಸಮಾವೇಶದಲ್ಲಿ ಮಾತನಾಡಿದ ಅವರು, ‘ಬಿಜೆಪಿ ಅಧಿಕಾರಕ್ಕೆ ಬಂದ ಮೊದಲ ವರ್ಷವೇ ಸಂವಿಧಾನ ಪರಾಮರ್ಶೆಗೆ ಮುಂದಾಯಿತು. ಬಡವರು, ರೈತರು, ಕಾರ್ಮಿಕರು, ಮಹಿಳೆಯರ ಕೈಯಲ್ಲಿರುವ ಏಕಮಾತ್ರ ಅಸ್ತ್ರ ಸಂವಿಧಾನ. ಅದನ್ನೇ ಬದಲಿಸಿದರೆ, ಇಡೀ ದೇಶವನ್ನು ತಮ್ಮ ಸ್ವಾರ್ಥಕ್ಕೆ ಬಳಸಿಕೊಳ್ಳಬಹುದು ಎಂಬುದು ಅವರ ಉಪಾಯ’ ಎಂದರು.

‘ಸ್ವಾತಂತ್ರ್ಯದ ಬಳಿಕ ಹಲವು ಸರ್ಕಾರಗಳು ಬಂದಿವೆ. ಎಲ್ಲಾ ಪಕ್ಷಗಳೂ ಆಡಳಿತ ಮಾಡಿವೆ. ಆದರೆ, ಬಿ.ಆರ್. ಅಂಬೇಡ್ಕರ್ ಅವರನ್ನು ಸಂಸತ್ತಿನಲ್ಲಿಯೇ ಅವಮಾನಿಸಿದ ಅಪಕೀರ್ತಿ ಗೃಹ ಸಚಿವ ಅಮಿತ್ ಶಾ ಅವರಿಗೆ ಸಲ್ಲುತ್ತದೆ. ಆರ್‌ಎಸ್‌ಎಸ್ ತತ್ವಗಳು ಗಾಂಧಿ- ಅಂಬೇಡ್ಕರ್ ತತ್ವಗಳಿಗೆ ವಿರುದ್ಧವಾಗಿವೆ. ಅದಕ್ಕೆ ಬಿಜೆಪಿ ಯಾವಾಗಲೂ ಸಂವಿಧಾನ ಮತ್ತು ಅಂಬೇಡ್ಕರ್ ಅವರನ್ನು ಅವಮಾನಿಸುತ್ತದೆ’ ಎಂದರು.

‘ಮಹಾತ್ಮ ಗಾಂಧಿ ಸತ್ಯ-ಅಹಿಂಸೆ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ಸತ್ಯ-ಅಹಿಂಸೆ ತಳಹದಿಯಲ್ಲೇ ಅಂಬೇಡ್ಕರ್ ಸಂವಿಧಾನ ರಚಿಸಿದರು. ಇದನ್ನು ಅರಗಿಸಿಕೊಳ್ಳದ ಬಿಜೆಪಿ ಸಂವಿಧಾನ ಬದಲಿಸುವ ಹುನ್ನಾರ ನಡೆಸಿದೆ. ಸಂವಿಧಾನ ಬದಲಾದರೆ ಬಹುತ್ವದ ಭಾರತ ಉಳಿಯುವುದಿಲ್ಲ’ ಎಂದು ಎಚ್ಚರಿಸಿದರು.

11ನೇ ಪುಟ ನೋಡಿ

# ಸುವರ್ಣ ಸೌಧದೆದುರು 25 ಅಡಿ ಗಾಂಧಿ ಪ್ರತಿಮೆ ಲೋಕಾರ್ಪಣೆ



ಬೆಳಗಾವಿಯ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಮಂಗಳವಾರ ಅನಾವರಣಗೊಳಿಸಲಾದ ಮಹಾತ್ಮ ಗಾಂಧಿ ಪ್ರತಿಮೆಯ ಮುಂದೆ ಕಾಂಗ್ರೆಸ್ ನಾಯಕರು.

# ಬಿಜೆಪಿ, ಆರೆಸ್ಸೆಸ್ ವಿರುದ್ಧ ಕಾಂಗ್ರೆಸ್ ಗಾಂಧಿ, ಭೀಮ್, ಸಂವಿಧಾನ ಅಸ್ತ್ರ

## ಬೆಳಗಾವಿಯಲ್ಲಿ ಗಾಂಧಿ ಭಾರತ ಮಹಾ ಸಮ್ಮೇಳನ | ಕೇಸರಿ ಪಾಳಯಕ್ಕೆ ತಿವಿದ ನಾಯಕರು

## ತ್ರಿವಳಿ ಅಸ್ತ್ರದೊಂದಿಗೆ ದೇಶಾದ್ಯಂತ ವರ್ಷವಿಡೀ 'ನವ ಸತ್ಯಾಗ್ರಹ' ಅಭಿಯಾನಕ್ಕೆ ಮುನ್ನುಡಿ

■ ಉದಯವಾಣಿ ಸಮಾಚಾರ

ಬೆಂಗಳೂರು: ಗಾಂಧಿ, ಡಾ.ಅಂಬೇಡ್ಕರ್ ಮತ್ತು ಸಂವಿಧಾನ ಎಂಬ 'ತ್ರಿವಳಿ ಅಸ್ತ್ರ'ದೊಂದಿಗೆ ಬಿಜೆಪಿ ವಿರುದ್ಧ ದೇಶವ್ಯಾಪಿ ಹೋರಾಟಕ್ಕೆ ಕಹಳೆ ಮೊಳಗಿಸಿರುವ ಕಾಂಗ್ರೆಸ್, ಈ 'ನವ ಸತ್ಯಾಗ್ರಹ'ದ ನೆಲೆಗಟ್ಟಿನಲ್ಲಿ ತನ್ನನ್ನು ಬಲಗೊಳಿಸಿಕೊಳ್ಳಲು ಹೊರಟಿದೆ. ಇದಕ್ಕೆ ಕುಂದಾನಗರಿ ಬೆಳಗಾವಿಯಲ್ಲಿ ನಡೆದ ಐತಿಹಾಸಿಕ ಸಮಾವೇಶ ವೇದಿಕೆಯಾಯಿತು.

ಇತ್ತೀಚೆಗೆ ಗಾಂಧೀಜಿ, ಅಂಬೇಡ್ಕರ್ ಮತ್ತು ಸಂವಿಧಾನದ ಬಗ್ಗೆ ಬಿಜೆಪಿ ನಾಯಕರು ನೀಡಿದ ಹೇಳಿಕೆಗಳ ವಿರುದ್ಧ ಬಾಪು ಸತ್ಯಾಗ್ರಹದ ಹೊಸ ರೂಪದೊಂದಿಗೆ ದೇಶಾದ್ಯಂತ ಹೋರಾಟ ನಡೆಸಲು ಕಾಂಗ್ರೆಸ್ ತೀರ್ಮಾನಿಸಿದೆ. ಅದಕ್ಕೆ ಮಂಗಳವಾರ ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ಮರುನಿಗದಿಯಾಗಿದ್ದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದಲ್ಲಿ ಸಾಂಕೇತಿಕ ಚಾಲನೆ ನೀಡಲಾಯಿತು. 'ಡಾ.ಅಂಬೇಡ್ಕರ್ ಕಾಂಗ್ರೆಸ್‌ಗೊಂದು ಫ್ಯಾಷನ್ ಆಗಿಬಿಟ್ಟಿದೆ' ಅಂತ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ ಹೇಳಿಕೆ ಬೆನ್ನಲ್ಲೇ ನಡೆದ ಈ ಶತಮಾನೋತ್ಸವ ಕಾರ್ಯಕ್ರಮದುದ್ದಕ್ಕೂ ಬಿಜೆಪಿ ನಾಯಕರನ್ನು ತರಾಟೆಗೆ ತೆಗೆದುಕೊಳ್ಳಲಾಯಿತು. ▶ 10ನೇ ಪುಟಕ್ಕೆ

### ಕೆಣಕಿದ್ರೆ ಸುಟ್ಟೋಗ್ತೀರಿ: ಖರ್ಗೆ

1. ಅಂಬೇಡ್ಕರ್ ಹೆಸರಲ್ಲಿ ನಮ್ಮ ನಡುವೆ ಜಗಳ ಹಚ್ಚುವ ಕೆಲಸವನ್ನು ಮೋದಿ, ಅಮಿತ್ ಶಾ ಮಾಡುತ್ತಿದ್ದಾರೆ.
2. ಬಾಬಾ ಸಾಹೇಬ್ ಅಂಬೇಡ್ಕರ್ ಹೆಸರಿನಲ್ಲಿ ನಮ್ಮನ್ನು ಕೆಣಕಲು ಬರಬೇಡಿ, ಬಂದ್ರೆ ಸುಟ್ಟು ಹೋಗುತ್ತೀರಿ.
3. ಬಿಜೆಪಿ, ಆರ್ ಎಸ್ ಎಸ್ ಮತ್ತು ಹಿಂದೂ ಮಹಾಸಭಾದವರು ಯಾವತ್ತಿದ್ದರೂ ದಲಿತ ವಿರೋಧಿಗಳು
4. ಮೋದಿ, ಶಾಗೆ ಗಾಂಧೀಜಿ ಬಗ್ಗೆ ಕಳಕಳಿ ಇಲ್ಲ. ಅವರು ಗಾಂಧಿ ಹಂತಕ ನಾಥುರಾಂ ಗೋಡ್ಸೆ ಅಭಿಮಾನಿಗಳು

### ಹೋರಾಟಕ್ಕೆ ಸಜ್ಜಾಗಿ: ಪ್ರಿಯಾಂಕಾ

1. ಸಂವಿಧಾನ ಬದಲಾಯಿಸಲು ಹೊರಟಿರುವ ಬಿಜೆಪಿ ವಿರುದ್ಧ ಪ್ರತಿಯೊಬ್ಬರೂ ಹೋರಾಟಕ್ಕೆ ಸಜ್ಜಾಗಬೇಕು
2. ಮೋದಿ , ಅಮಿತ್ ಶಾ ಸಂವಿಧಾನ ವಿರೋಧಿಗಳು. ಬಿಜೆಪಿಯ ಪ್ರತಿ ನೀತಿಯೂ ಸಂವಿಧಾನ ವಿರೋಧಿ.
3. ಶಾ ಕೇವಲ ಅಂಬೇಡ್ಕರ್‌ರನ್ನು ಮಾತ್ರ ಟೀಕಿಸಿಲ್ಲ, ಸ್ವಾತಂತ್ರ್ಯ ಹೋರಾಟಗಾರರಿಗೂ ಅವಮಾನಿಸಿದ್ದಾರೆ
4. ಬಿಜೆಪಿ ಬಡವರ ವಿರೋಧಿಯಾಗಿದೆ. ಅವರ ಪ್ರತಿ ಹೆಜ್ಜೆಯೂ ನಿಮ್ಮ ಹಿತದ ವಿರುದ್ಧವಾಗಿಯೇ ಇರುತ್ತದೆ.

### ಸಿದ್ಧಾಂತ ಗೆಲ್ಲಲಿ: ಸಿಎಂ ಸಿದ್ದು

1. ದೇಶದ ಸಂವಿಧಾನವನ್ನು ವಿರೋಧಿಸುತ್ತಿರುವ ಬಿಜೆಪಿ, ಆರೆಸ್ಸೆಸ್ ಸಿದ್ಧಾಂತಗಳ ವಿರುದ್ಧ ಹೋರಾಡಬೇಕಿದೆ
2. ಚುನಾವಣೆಗಳನ್ನು ಗೆಲ್ಲುವುದು ಮುಖ್ಯವಲ್ಲ, ನಮ್ಮ ಸಿದ್ಧಾಂತಗಳನ್ನು ನಾವು ಗೆಲ್ಲಿಸುವುದು ಮುಖ್ಯ
3. ನಾವು ಸಂವಿಧಾನ ರಕ್ಷಿಸಿದರೆ, ಸಂವಿಧಾನ ನಮ್ಮನ್ನು ರಕ್ಷಿಸುತ್ತೆ. ಸಂವಿಧಾನ ಸುಟ್ಟ ಬಿಜೆಪಿಯನ್ನು ದೇಶ ಕ್ಷಮಿಸಲ್ಲ
4. ಭಾರತೀಯರ ನಡುವೆ ವ್ಯವಸ್ಥಿತವಾಗಿ ಬಿರುಕು ಮೂಡಿಸುತ್ತಿರುವ ಬಿಜೆಪಿ ಯತ್ನವನ್ನು ವಿಫಲಗೊಳಿಸಬೇಕು

### ಗಾಂಧಿ ದೇಶದ ಆತ್ಮ: ಡಿಕೆಶಿ

1. ಸರ್ವಕಾಲವೂ ನಮ್ಮದು ಗಾಂಧಿ ಮಂತ್ರ. ಅಂಬೇಡ್ಕರ್ ಸ್ಮರಣೆ, ಸಂವಿಧಾನ ರಕ್ಷಣೆಯೇ ಈ ಸಮಾವೇಶದ ಗುರಿ
2. ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಎನ್ನುವುದು ಕೇವಲ ಘೋಷಣೆಗಳಲ್ಲ, ಇವು ಭಾರತದ ಶಕ್ತಿ ಮಂತ್ರ
3. ಅಂದು ಗಾಂಧೀಜಿ, ನೆಹರೂ ಕುಳಿತ ಜಾಗದಲ್ಲಿ ಇಂದು ಕನ್ನಡನಾಡಿನ ವರಪುತ್ರ ಖರ್ಗೆಯವರು ಕುಳಿತಿದ್ದಾರೆ
4. ಗಾಂಧೀಜಿ ಭಾರತದ ಆತ್ಮ. ದುಷ್ಟರಿಂದ ಗಾಂಧಿ ಚಿಂತನೆ ಉಳಿಸಬೇಕು. ಗೋಡ್ಸೆ ಚಿಂತನೆ ನಾಶ ಮಾಡಬೇಕು.